## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 47 (82) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಬಿ.ಎಂ. ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 04.07.2023 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರಿನ ಬೈಕಂಪಾಡಿ ಸೇರಿ ಇತರ ಕೈಗಾರಿಕಾ ಪ್ರದೇಶಗಳ ಸಂಪರ್ಕ ರಸ್ತೆಗಳು ತೀರಾ ಹದಗೆಟ್ಟಿದ್ದು ಸರಕು ಸಾಗಣೆ ವಾಹನಗಳು, ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಮಂಗಳೂರಿನ ಬೈಕಂಪಾಡಿ ಕೈಗಾರಿಕಾ ಪ್ರದೇಶಕ್ಕೆ ಸಂಪರ್ಕ ರಸ್ತೆ, ಕಾನ್ನಾಡು ಕೈಗಾರಿಕಾ ಪ್ರದೇಶ ಸಂಪರ್ಕ ರಸ್ತೆ ಹಾಗೂ ಗಂಜೀಮಠ ಕೈಗಾರಿಕಾ ಪ್ರದೇಶದ ಸಂಪರ್ಕ ರಸ್ತೆ ಸುಸ್ಥಿತಿಯಲ್ಲಿರುತ್ತದೆ. |
| ಆ) | ಒಂದೆಡೆ ಬಂಡವಾಳ ಹೂಡಿಕೆಯನ್ನು ಆಕರ್ಷಿಸುತ್ತಾ ಇನ್ನೊಂದೆಡೆ ರಸ್ತೆಗಳು ಮುಂತಾದ ಮೂಲ ಸೌಕರ್ಯಗಳನ್ನು ಆದ್ಯತೆ ಮೇರೆಗೆ ಉತ್ತಮ ಗುಣಮಟ್ಟದಲ್ಲಿ ಕಲ್ಪಿಸಲು ಸರ್ಕಾರದ ನಿಲುವುಗಳೇನು? (ವಿವರ ನೀಡುವುದು) | ಮಂಡಳಿ ವತಿಯಿಂದ ನಿರ್ಮಾಣಗೊಳ್ಳುತ್ತಿರುವ ಕೈಗಾರಿಕಾ ಪ್ರದೇಶಗಳ ಮೂಲಭೂತ ಸೌಕರ್ಯಗಳಲ್ಲಿ ಒಂದಾದ ರಸ್ತೆಗಳನ್ನು Ministry of Road Transport and highways specification ಅನುಸಾರ ಉತ್ತಮ ಗುಣಮಟ್ಟದ ರಸ್ತೆಗಳನ್ನಾಗಿ ನಿರ್ಮಿಸಲಾಗುತ್ತಿದೆ. |
| ಇ) | ಮಂಗಳೂರು, ಕಾನ್ನಾಡು, ಗಂಜಿಮಠದ EPIP ಮೊದಲಾಗಿ 17 ಕಿ.ಮೀ ಉದ್ದದ ರಸ್ತೆಯ 7 ಕಿ.ಮೀ ಕಾಂಕ್ರೀಟೀಕರಣವಾಗಿದ್ದು ಉಳಿದ ಭಾಗಗಳು ಕೆಟ್ಟುಹೋಗಿದ್ದು ಇದರ ದುರಸ್ತಿ ನಿರ್ವಹಣೆ ಅಭಿವೃದ್ಧಿಪಡಿಸಿ ದೀರ್ಘಕಾಲಿಕ ಪರಿಹಾರ ಕೊಡಿಸುವಲ್ಲಿ ಸರ್ಕಾರದ ಕಾರ್ಯ ಯೋಜನೆಗಳೇನು? (ವಿವರ ನೀಡುವುದು) | ಮಂಗಳೂರಿನ ಬೈಕಂಪಾಡಿ ಕೈಗಾರಿಕಾ ಪ್ರದೇಶದಲ್ಲಿ ಒಟ್ಟು 17 ಕಿ.ಮೀ ಉದ್ದದ ರಸ್ತೆಯಿದ್ದು ಸರ್ಕಾರದ Critical Infrastructure Scheme ನಡಿ ಒಟ್ಟು 7 ಕಿ.ಮೀ ಉದ್ದದ ರಸ್ತೆಯನ್ನು ಕಾಂಕ್ರೀಟ್ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿರುತ್ತದೆ. |

| | | |
|---|---|---|
| ಈ) | ಸುಮಾರು 50 ವರ್ಷಗಳ ಹಳೆಯ ಬೈಕಂಪಾಡಿ ಕೈಗಾರಿಕಾ ಪ್ರದೇಶದ ಬಡಾವಣೆಗಳು ಇನ್ನು ಎದುರಿಸುತ್ತಿರುವ ಮೂಲ ಸೌಲಭ್ಯದ ಕೊರತೆ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಸರ್ಕಾರ ಸ್ಪಂದಿಸದಿರಲು ಕಾರಣಗಳೇನು ? (ವಿಸ್ತೃತ ವಿವರ/ವರದಿ ನೀಡುವುದು) | ಮಂಡಳಿಯು ನಿರ್ಮಿಸಿರುವ ಬೈಕಂಪಾಡಿ ಕೈಗಾರಿಕಾ ಪ್ರದೇಶದ ಅಂತಿಮ ದರ ನಿಗದಿಯಾಗಿದ್ದು, ಕೈಗಾರಿಕಾ ಪ್ರದೇಶದ ನಿವೇಶನಗಳಿಗೆ ಶುದ್ಧ ಕ್ರಯಪತ್ರವನ್ನು ನೀಡಲಾಗಿರುತ್ತದೆ.<br><br>ಮಂಡಳಿಯು ಲಾಭ-ನಷ್ಟವಿಲ್ಲದೆ ಕಾರ್ಯ ನಿರ್ವಹಿಸುತ್ತಿರುವುದರಿಂದ ಅಂತಿಮ ದರ ನಿಗದಿಯಾದ ಕೈಗಾರಿಕಾ ಪ್ರದೇಶಗಳಲ್ಲಿನ ಮೂಲಭೂತ ಸೌಕರ್ಯಗಳನ್ನು ಮತ್ತೊಮ್ಮೆ ಮಂಡಳಿ ವತಿಯಿಂದ ಉನ್ನತ ದರ್ಜೆಗೇರಿಸಲು ಅವಕಾಶವಿರುವುದಿಲ್ಲ. |

**ಸಂಖ್ಯೆ: ಸಿಐ 128 ಐಎಪಿ 2023**

**(ಎಂ.ಬಿ. ಪಾಟೀಲ)**
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.**